(ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಆರ್.ವಿ.ದೇಶಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು): 33ನೇ ಪಟ್ಟಿಯಲ್ಲಿರುವ 48 ಪ್ರಶ್ನೆಗಳ ಪೈಕಿ 28 ಪ್ರಶ್ನೆಗಳಿಗೆ ಸಂಬಂಧಪಟ್ಟ ಉತ್ತರಗಳನ್ನು ಸದನದ ಮುಂದೆ ಮಂಡಿಸುತ್ತೇನೆ.

ವಿಷಯ: ವಸತಿನಿಲಯಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿ ಬಗ್ಗೆ.

2528 (3760)

ಶ್ರೀ ಎಸ್.ಅಂಗಾರ (ಸುಳ್ಯ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸುಳ್ಯ ವಿಧಾನ ಸಭಾ ಕ್ಷೇತ್ರದಲ್ಲಿ ಎಸ್.ಸಿ.ಎಸ್.ಟಿ ಹಾಗೂ ಹಿಂದುಳಿದವರ್ಗಗಳ ಒಟ್ಟು ಎಷ್ಟು ಬಾಲಕ-ಬಾಲಕಿಯರ ವಿದ್ಯಾರ್ಥಿನಿಲಯಗಳಿವೆ?

ಆ) ಈ ವಸತಿನಿಲಯಗಳಲ್ಲಿ ಎಷ್ಟು ಅಡಿಗೆ ಸಹಾಯಕರು ಇರಬೇಕು, ಎಷ್ಟು ಜನ ಇದ್ದಾರೆ-ಖಾಲಿ ಇರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು-ಯಾವ ರೀತಿ ಭರ್ತಿ ಮಾಡಲಾಗುವುದು?

ಇ) 1994ರಿಂದ 1996ರವರೆಗೆ ಸುಳ್ಯ ವಿಧಾನಸಭಾ ಕ್ಷೇತ್ರದಲ್ಲಿರುವ ವಸತಿನಿಲಯಗಳಿಗೆ ಸೇರ್ಪಡೆಗೆ ಬಂದ ಒಟ್ಟು ಅರ್ಜಿಗಳು ಎಷ್ಟು?

ಈ) ಎಷ್ಟು ಜನರನ್ನು ಸೇರ್ಪಡೆ ಮಾಡಿಕೊಳ್ಳಲಾಗಿದೆ ಎಷ್ಟು ವಿದ್ಯಾರ್ಥಿ-ವಿದ್ಯಾರ್ಥಿನಿಯರನ್ನು ಸೇರ್ಪಡೆ ಮಾಡಿಕೊಳ್ಳದೆ ಕೈಬಿಡಲಾಗಿದೆ (ವರ್ಷವಾರು ವಿವರ ನೀಡುವುದು).

ಶ್ರೀ ಕೆ.ಎಂ.ಕೃಷ್ಣಾರೆಡ್ಡಿ (ಸಮಾಜ ಕಲ್ಯಾಣ ಸಚಿವರು):

ಅ) ಸುಳ್ಯ ವಿಧಾನಸಭಾ ಕ್ಷೇತ್ರದಲ್ಲಿ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ವರ್ಗಗಳ ವಿದ್ಯಾರ್ಥಿಗಳಿಗೆ 3 ಬಾಲಕರ ಮತ್ತು 1 ಬಾಲಕಿಯರ ವಿದ್ಯಾರ್ಥಿನಿಲಯಗಳಿವೆ. ಹಾಗೂ ಹಿಂದುಳಿದ ವರ್ಗಗಳು ಮತ್ತು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗಾಗಿ 1 ಮೆಟ್ರಿಕ್‌ನಂತರದ ಬಾಲಕಿಯರ ವಿದ್ಯಾರ್ಥಿನಿಲಯ ಮತ್ತು 5 ಮೆಟ್ರಿಕ್‌ಪೂರ್ವ ಬಾಲಕರ ವಿದ್ಯಾರ್ಥಿನಿಲಯಗಳಿವೆ.

ಆ) ಸಮಾಜ ಕಲ್ಯಾಣ ಇಲಾಖೆಗೆ ಸಂಬಂಧಿಸಿದ ವಿದ್ಯಾರ್ಥಿನಿಲಯಗಳಲ್ಲಿ 4 ಅಡಿಗೆ ಸಹಾಯಕರ ಹುದ್ದೆಗಳು ಇರಬೇಕಿದ್ದು, ಇವುಗಳಲ್ಲಿ ಮೂರು ಅಡಿಗೆ ಸಹಾಯಕ ಹುದ್ದೆಗಳನ್ನು ತುಂಬಲಾಗಿದೆ.

ಹಿಂದುಳಿದ ವರ್ಗಗಳು ಮತ್ತು ಅಲ್ಪಸಂಖ್ಯಾತರ ಇಲಾಖೆಗೆ ಸಂಬಂಧಿಸಿದ ವಿದ್ಯಾರ್ಥಿನಿಲಯಗಳಲ್ಲಿ 7 ಅಡಿಗೆ ಸಹಾಯಕರ ಹುದ್ದೆಗಳು ಬೇಕಿದ್ದು, ಈ ಪೈಕಿ 5 ಹುದ್ದೆಗಳನ್ನು ತುಂಬಲಾಗಿದೆ.

ಖಾಲಿ ಇರುವ ಹುದ್ದೆಗಳನ್ನು ಜಿಲ್ಲಾ ಹಂತದಲ್ಲಿ ಭರ್ತಿ ಮಾಡಲು ಸಂಬಂಧಿಸಿದ ಜಿಲ್ಲಾ ಪಂಚಾಯತ್‌ಗೆ ಸೂಚನೆ ನೀಡಲಾಗಿದೆ.

ಇ) 1994ರಿಂದ 96ರವರೆಗೆ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳು ಮತ್ತು ಅಲ್ಪಸಂಖ್ಯಾತರ ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಸೇರ್ಪಡೆಗೆ ಬಂದ ಒಟ್ಟು ಅರ್ಜಿಗಳ ವಿವರ ಈ ಕೆಳಕಂಡಂತಿದೆ:

ವರ್ಷ	ಸಮಾಜ ಕಲ್ಯಾಣ ಇಲಾಖೆ	ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ
1994-95	192	265
1995-96	197	273
1996-97	183	285

ಈ) 1994-95ರಿಂದ 1996ರವರೆಗೆ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳು ಮತ್ತು ಅಲ್ಪಸಂಖ್ಯಾತರ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಸೇರ್ಪಡೆ ಮಾಡಿಕೊಳ್ಳಲಾದ ಹಾಗೂ ಕೈಬಿಡಲಾದ ವಿದ್ಯಾರ್ಥಿಗಳ ವಿವರ ಕೆಳಕಂಡಂತಿದೆ:

	ಸಮಾಜ ಕಲ್ಯಾಣ ಇಲಾಖೆ			ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ		
	94-95	95-96	96-97	94-95	95-96	96-97
1) ಸೇರ್ಪಡೆ ಮಾಡಿಕೊಳ್ಳಲಾದ ವಿದ್ಯಾರ್ಥಿಗಳ ಸಂಖ್ಯೆ	165	167	165	253	249	256
2) ಕೈಬಿಡಲಾದ ವಿದ್ಯಾರ್ಥಿಗಳ ಸಂಖ್ಯೆ	27	30	18	12	24	29